# National Bulletin In Kannada
## 11.02.2026 7.35 am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

11.02.2026 7.35 am

<><><*><><<>

ಮುಖ್ಯಾಂಶಗಳು

೧. ಸಂಸತ್ತಿನ ಉಭಯ ಸದನಗಳಲ್ಲಿ ೨೦೨೬-೨೭ನೇ ಸಾಲಿನ ಕೇಂದ್ರ ಮುಂಗಡ ಪತ್ರದ ಮೇಲಿನ ಚರ್ಚೆ ಇಂದು ಮುಂದುವರಿಕೆ

೨. ಸೈಬರ್ ಅಪರಾಧಗಳ ತಡೆಗೆ ಕೇಂದ್ರ ಸರ್ಕಾರದ ಎಲ್ಲ ಏಜೆನ್ಸಿಗಳು ಸಮನ್ವಯದಿಂದ ಕಾರ್ಯನಿರ್ವಹಣೆ: ಕೇಂದ್ರ ಸಚಿವ ಅಮಿತ್ ಶಾ

೩. ಪ್ರಧಾನಿ ಆಹ್ವಾನದ ಮೇರೆಗೆ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಇದೇ ೧೭ರಿಂದ ಭಾರತ ಭೇಟಿ; ದ್ವಿಪಕ್ಷೀಯ ಸಹಕಾರ ಬಲವರ್ಧನೆ ಕುರಿತು ಚರ್ಚೆ ನಿರೀಕ್ಷೆ

೪. ಟಿ-೨೦ ವಿಶ್ವಕಪ್ ಕ್ರಿಕೆಟ್; ನ್ಯೂಜಿಲೆಂಡ್, ನೆದರ್ಲೆಂಡ್ಸ್ ಅಮೆರಿಕ ತಂಡಗಳಿಗೆ ಗೆಲುವು; ಇಂದು ಮೂರು ಪಂದ್ಯಗಳ ಆಯೋಜನೆ

<><><*><><<>

ಸಂಸತ್ತಿನ ಉಭಯ ಸದನಗಳು ೨೦೨೬-೨೭ನೇ ಸಾಲಿನ ಕೇಂದ್ರ ಆಯವ್ಯಯದ ಮೇಲಿನ ಚರ್ಚೆಯನ್ನು ಇಂದು ಪುನರಾರಂಭಿಸಲಿವೆ. ನಿನ್ನೆ ರಾಜ್ಯಸಭೆಯ ಚರ್ಚೆಯಲ್ಲಿ ಭಾಗವಹಿಸಿದ ಶಿವಸೇನೆ ಸಂಸದ ಮಿಲಿಂದ್ ದಿಯೋರಾ, ಈ ರಾಜಕೀಯ ಮತ್ತು ಆರ್ಥಿಕವಾಗಿ ಪ್ರಕ್ಷುಬ್ಧ ಸಮಯದಲ್ಲಿ, ಭಾರತವು ಸ್ಥೂಲ ಆರ್ಥಿಕ ಬೆಳವಣಿಗೆ ಮತ್ತು ಸ್ಥಿರತೆಯ ಅಪರೂಪದ ದ್ವೀಪವಾಗಿ ಏಕಾಂಗಿಯಾಗಿ ನಿಂತಿದೆ ಎಂದು ಹೇಳಿದರು. ಬಿಜೆಪಿಯ ಸುರೇಂದ್ರ ಸಿಂಗ್ ನಗರ್ ಮಾತನಾಡಿ, ಆರ್ಥಿಕ ಬೆಳವಣಿಗೆಯ ದರವನ್ನು ಹೆಚ್ಚಿಸುವುದು, ಜನರ ನಿರೀಕ್ಷೆಗಳನ್ನು ಪೂರೈಸುವುದು ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಎಲ್ಲಾ ಯೋಜನೆಗಳು ಜನರನ್ನು ತಲುಪುವುದನ್ನು ಖಚಿತಪಡಿಸಿಕೊಳ್ಳಲು ಬಜೆಟ್ ಆದ್ಯತೆ ನೀಡುತ್ತದೆ ಎಂದು ಹೇಳಿದರು. ಟಿಡಿಪಿಯ ಮಸ್ತಾನ್ ರಾವ್ ಬೀಧಾ ಮಾತನಾಡಿ, ಈ ಬಜೆಟ್ ಸ್ಥೂಲ ಆರ್ಥಿಕ ಸ್ಥಿರತೆ, ಮೂಲಸೌಕರ್ಯ ಬೆಳವಣಿಗೆ, ತಾಂತ್ರಿಕ ಪರಿವರ್ತನೆ ಮತ್ತು ಸಾಮಾಜಿಕ ಸೇರ್ಪಡೆಯನ್ನು ಸಂಯೋಜಿಸುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಏತನ್ಮಧ್ಯೆ, ಎನ್ ಸಿಪಿ-ಎಸ್ಸಿಪಿಯ ಫೌಜಿಯಾ ಖಾನ್ ಮಕ್ಕಳ ಕೇಂದ್ರಿತ ವೆಚ್ಚದಲ್ಲಿ ಕುಸಿತದ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಡಿಎಂಕೆಯ ಕನಿಮೋಳಿ ಎನ್.ವಿ.ಎನ್.ಸೋಮು, ಕಾಂಗ್ರೆಸ್ ನ ನೀರಜ್ ಡಂಗಿ, ಟಿಎಂಸಿಯ ಸುಖೇಂದು ಶೇಖರ್ ರೇ ಕೂಡ ಬಜೆಟ್ ಕುರಿತು ಮಾತನಾಡಿದರು. ಲೋಕಸಭೆಯಲ್ಲಿ

ಕಾಂಗ್ರೆಸ್ ಸಂಸದ ಶಶಿ ತರೂರ್ ಚರ್ಚೆಗೆ ಚಾಲನೆ ನೀಡಿದರು. ಸರ್ಕಾರದ ವೆಚ್ಚ ಕಡಿಮೆಯಾಗಿದೆ ಮತ್ತು ತೆರಿಗೆ ಸ್ವೀಕೃತಿಗಳು ಸಮತಟ್ಟಾಗಿವೆ ಎಂದು ಅವರು ಬಜೆಟ್ ಅನ್ನು ಟೀಕಿಸಿದರು. ಈ ವರ್ಷದ ಬಜೆಟ್ ನಿರುದ್ಯೋಗ, ಹೆಚ್ಚುತ್ತಿರುವ ಜೀವನ ವೆಚ್ಚ ಮತ್ತು ಅಸಮಾನತೆಯನ್ನು ನಿರ್ಲಕ್ಷಿಸಿದೆ ಎಂದು ಅವರು ಆರೋಪಿಸಿದರು. ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿಯ ಅಪರಾಜಿತಾ ಸಾರಂಗಿ, ಬಜೆಟ್ ಸರ್ಕಾರದ ಬದ್ಧತೆ, ದೃಢನಿಶ್ಚಯ ಮತ್ತು ಸ್ಥಿರತೆಯನ್ನು ಪ್ರತಿಬಿಂಬಿಸುತ್ತದೆ. ಹಲವಾರು ರಾಷ್ಟ್ರಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಿದ್ದಕ್ಕಾಗಿ ಅವರು ಸರ್ಕಾರವನ್ನು ಶ್ಲಾಘಿಸಿದರು. ಇದೇ ವೇಳೆ ಬದಲಾಗುತ್ತಿರುವ ವಿಭಿನ್ನ ವಿಶ್ವ ಕ್ರಮದಲ್ಲಿ ಭಾರತವು ಜಾಣತನದಿಂದ ಮಾರ್ಗದರ್ಶನ ಮಾಡುವ ಸಾಮರ್ಥ್ಯವನ್ನು ತೋರಿಸಿದೆ ಎಂದು ಹೇಳಿದರು. ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್, ಟಿಎಂಸಿಯ ಅಭಿಷೇಕ್ ಬ್ಯಾನರ್ಜಿ, ಶಿವಸೇನೆಯ ಅನಿಲ್ ದೇಸಾಯಿ, ಜೆಡಿಯುನ ದಿಲೇಶ್ವರ್ ಕಮೈತ್, ಬಿಜೆಪಿಯ ಡಾ.ಡಿ.ಪುರಂದೇಶ್ವರಿ ಮತ್ತು ಪಕ್ಷದ ಇತರ ಸಂಸದರು ಸದನದಲ್ಲಿ ಮಾತನಾಡಿದರು.

<>><><*><><<>

ಎನ್ಐಎ, ಇ.ಡಿ ಮತ್ತು ಬ್ಯಾಂಕುಗಳಂತಹ ಇತರ ಸಂಸ್ಥೆಗಳೊಂದಿಗೆ ಜಂಟಿ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಮತ್ತು ಅಪರಾಧಗಳನ್ನು ಮಾಡಲು ಹೊಸ ತಂತ್ರಜ್ಞಾನಗಳನ್ನು ಬಳಸುವ ಸೈಬರ್ ಅಪರಾಧಿಗಳನ್ನು ಎದುರಿಸಲು ಎರಡು ಹೆಜ್ಜೆ ಮುಂದಿರಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಿಬಿಐ ಮತ್ತು ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರಕ್ಕೆ ಸೂಚಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ನಡೆದ 'ಸೈಬರ್-ಸಕ್ರಿಯಗೊಳಿಸಿದ ವಂಚನೆಗಳನ್ನು ನಿಭಾಯಿಸುವುದು ಮತ್ತು ಪರಿಸರ ವ್ಯವಸ್ಥೆಯನ್ನು ಕಿತ್ತುಹಾಕುವುದು' ಕುರಿತ ರಾಷ್ಟ್ರೀಯ ಸಮ್ಮೇಳನದಲ್ಲಿ ಅವರು ಮುಖ್ಯ ಭಾಷಣ ಮಾಡಿದರು. ಈ ವೇಳೆ ಅವರು, ಸೈಬರ್ ಅಪರಾಧಗಳನ್ನು ತಡೆಗಟ್ಟಲು ಮತ್ತು ತಗ್ಗಿಸಲು ನರೇಂದ್ರ ಮೋದಿ ಸರ್ಕಾರದ ಎಲ್ಲಾ ಏಜೆನ್ಸಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಅವರು ಈ ತಿಂಗಳ ೧೭ರಿಂದ ಮೂರು ದಿನಗಳ ಅಧಿಕೃತ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ಫೆಬ್ರವರಿ ೧೯ರಂದು ನವದೆಹಲಿಯಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಭೇಟಿಯ ಸಮಯದಲ್ಲಿ, ಹೊರೈಜಾನ್ ೨೦೪೭ ಮಾರ್ಗಸೂಚಿಯಲ್ಲಿ ಪ್ರತಿಪಾದಿಸಲಾದ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಉಭಯ ನಾಯಕರು ಚರ್ಚೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಇಂಡೋ-ಪೆಸಿಫಿಕ್ ಸಹಕಾರ ಸೇರಿದಂತೆ ಪರಸ್ಪರ ಹಿತಾಸಕ್ತಿಯ

ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ನಾಯಕರು ಚರ್ಚಿಸಲಿದ್ದಾರೆ. ಉಭಯ ನಾಯಕರು ಭಾರತ-ಫ್ರಾನ್ಸ್ ನಾವೀನ್ಯತೆಯ ವರ್ಷವನ್ನು ಜಂಟಿಯಾಗಿ ಉದ್ಘಾಟಿಸಲು ಮುಂಬೈಗೆ ಭೇಟಿ ನೀಡಲಿದ್ದಾರೆ, ಇದನ್ನು ಎರಡೂ ದೇಶಗಳಲ್ಲಿ ೨೦೨೬ ರ ಉದ್ದಕ್ಕೂ ಆಚರಿಸಲಾಗುತ್ತದೆ. ಕಳೆದ ವರ್ಷ ಫೆಬ್ರವರಿಯಲ್ಲಿ ಪ್ರಧಾನಿ ಮೋದಿ ಅವರು ಫ್ರಾನ್ಸ್ ಗೆ ಭೇಟಿ ನೀಡಿದ ನಂತರ ಮ್ಯಾಕ್ರನ್ ಈ ಪ್ರವಾಸ ಕೈಗೊಳ್ಳುತ್ತಿದ್ದಾರೆ.

<>><><*><><<>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ತಮ್ಮ ವಿರುದ್ಧ ಪ್ರತಿಪಕ್ಷಗಳು ತಂದ ಅವಿಶ್ವಾಸ ಗೊತ್ತುವಳಿ ನೋಟಿಸ್ ಇತ್ಯರ್ಥವಾಗುವವರೆಗೂ ಸದನದ ಕಲಾಪಕ್ಕೆ ಹಾಜರಾಗುವುದಿಲ್ಲ ಎಂದು ಹೇಳಿದ್ದಾರೆ. ಇದಕ್ಕೂ ಮುನ್ನ ಬಿರ್ಲಾ ವಿರುದ್ಧ ಅವಿಶ್ವಾಸ ನಿರ್ಣಯದ ನೋಟಿಸ್ ಅನ್ನು ಪ್ರತಿಪಕ್ಷಗಳು ಲೋಕಸಭೆಯ ಪ್ರಧಾನ ಕಾರ್ಯದರ್ಶಿಗೆ ಸಲ್ಲಿಸಿದ್ದವು. ನಿಯಮಗಳ ಪ್ರಕಾರ, ನೋಟಿಸ್ ಅನ್ನು ಪರಿಶೀಲಿಸಿ ಪ್ರಕ್ರಿಯೆಗೊಳಿಸಲಾಗುವುದು ಎಂದು ಲೋಕಸಭಾ ಸಚಿವಾಲಯದ ಮೂಲಗಳು ತಿಳಿಸಿವೆ. ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷ, ಆರ್ಜೆಡಿ ಮತ್ತು ಎಡಪಕ್ಷಗಳು ಸೇರಿದಂತೆ ವಿರೋಧ ಪಕ್ಷಗಳ ೧೧೮ ಸದಸ್ಯರು ನೋಟಿಸ್ ಗೆ ಸಹಿ ಹಾಕಿದ್ದಾರೆ. ಆದರೆ, ಟಿಎಂಸಿ ಸಂಸದರು ನೋಟಿಸ್ ಗೆ ಸಹಿ ಹಾಕುವುದರಿಂದ ದೂರ ಉಳಿದಿದ್ದಾರೆ.

<>><><*><><<>

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ನಿನ್ನೆ ದೆಹಲಿಯಲ್ಲಿ ಭೇಟಿಯಾಗಿ ಹಲವು ವಿಷಯಗಳ ಕುರಿತು ಮಾತುಕತೆ ನಡೆಸಿದರು. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಚೌಹಾಣ್, ಭಾರತದ ಕೃಷಿಗೆ ಆಂಧ್ರಪ್ರದೇಶದ ಕೊಡುಗೆ ಶೇಕಡಾ ೧೦ ರಷ್ಟಿದೆ. ಹಲವಾರು ಯೋಜನೆಗಳು ಮತ್ತು ಉಪಕ್ರಮಗಳ ಮೂಲಕ ರಾಜ್ಯದಲ್ಲಿ ಕೃಷಿ ಮಾರ್ಗಸೂಚಿಯನ್ನು ಬಲಪಡಿಸಲು ಕೇಂದ್ರ ಸರ್ಕಾರವು ತಂಡವನ್ನು ರಚಿಸಿದೆ ಎಂದು ಅವರು ಮಾಹಿತಿ ನೀಡಿದರು.

<>><><*><><<>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ನಿನ್ನೆ ಬ್ರಿಕ್ಸ್ ೨೦೨೬ ಶೆರ್ಪಾಗಳು ಮತ್ತು ದೇಶದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದರು. ಈ ಸಂಬಂಧ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ.ಜೈಶಂಕರ್ , ಬ್ರಿಕ್ಸ್ ೨೦ ವರ್ಷಗಳನ್ನು ಪೂರೈಸುತ್ತಿದ್ದಂತೆ, ಇದು ಅಂತಾರಾಷ್ಟ್ರೀಯ ಸಹಕಾರ, ಸಮಾಲೋಚನೆ ಮತ್ತು ಸಮನ್ವಯಕ್ಕೆ ಮೌಲ್ಯಯುತ ವೇದಿಕೆಯಾಗಿ ನಿಂತಿದೆ.ಹಾಗೆಯೇ ಅದರ ಜನಕೇಂದ್ರಿತ ಕಾರ್ಯಸೂಚಿಯನ್ನು ಮುಂದಕ್ಕೆ ಕೊಂಡೊಯ್ಯುತ್ತದೆ ಎಂದು ಹೇಳಿದರು.

<>><><*><><<>

ಎರಡು ದಿನಗಳ "ರೋಡ್ ಟು ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬" ನಿನ್ನೆ ದುಬೈನ ಸಿಂಬಯೋಸಿಸ್ ಇಂಟರ್ ನ್ಯಾಷನಲ್ ಯೂನಿವರ್ಸಿಟಿಯಲ್ಲಿ ಪ್ರಾರಂಭವಾಗಿದೆ. ಈ ಸಭೆಯನ್ನುಅಬುಧಾಬಿಯಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಸಹಯೋಗದೊಂದಿಗೆ ಆಯೋಜಿಸಲಾಗಿದೆ. ಈ ತಿಂಗಳ ೧೬ ರಿಂದ ನವದೆಹಲಿಯಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಗೆ ಈ ಕಾರ್ಯಕ್ರಮವು ಪೂರ್ವಭಾವಿಯಾಗಿದೆ. ಕೃತಕ ಬುದ್ಧಿಮತ್ತೆಯ ಉದ್ದೇಶಪೂರ್ವಕ ಬಳಕೆ ಮತ್ತು ಅದರ ಸಾಮಾಜಿಕ ಪ್ರಭಾವವನ್ನು ಅನ್ವೇಷಿಸಲು ಇದು ನೀತಿ ನಿರೂಪಕರು, ಶಿಕ್ಷಣ ತಜ್ಞರು ಮತ್ತು ಉದ್ಯಮದ ನಾಯಕರನ್ನು ಒಟ್ಟುಗೂಡಿಸುತ್ತದೆ. ಯುಎಇಯಲ್ಲಿನ ಭಾರತದ ರಾಯಭಾರಿ ಡಾ.ದೀಪಕ್ ಮಿತ್ತಲ್ ಮತ್ತು ದುಬೈನಲ್ಲಿರುವ ಭಾರತದ ಕಾನ್ಸುಲ್ ಜನರಲ್ ಸತೀಶ್ ಶಿವನ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<>><><*><><<>

ಆಯುರ್ವೇದ ಔಷಧಿಗಳ ತಯಾರಕರ ಸಂಘವು ಭಾರತ-ಅಮೆರಿಕ ವ್ಯಾಪಾರ ಒಪ್ಪಂದವನ್ನು ಶ್ಲಾಘಿಸಿದ್ದು, ಇದು ದೇಶದ ಔಷಧೀಯ ಕ್ಷೇತ್ರಕ್ಕೆ ಸಕಾರಾತ್ಮಕ ಮತ್ತು ಸ್ಥಿರವಾದ ಬೆಳವಣಿಗೆಯಾಗಿದೆ ಎಂದು ಹೇಳಿದೆ. ಈ ಸಂಬಂಧ ಮಾಧ್ಯಮಗಳೊಂದಿಗೆ ಮಾತನಾಡಿದ ಎಎಂಎಎಂ ಅಧ್ಯಕ್ಷ ಡಾ.ಪ್ರದೀಪ್ ಮುಲ್ತಾನಿ, ಮಧ್ಯಂತರ ಚೌಕಟ್ಟು ನಿರ್ಣಾಯಕ ನೀತಿ ನಿಶ್ಚಿತತೆಯನ್ನು ಒದಗಿಸುತ್ತದೆ, ಏಕೆಂದರೆ ಔಷಧಗಳು ವಿಶೇಷವಾಗಿ ಜೆನೆರಿಕ್ ಔಷಧಿಗಳು ಅಮೆರಿಕಕ್ಕೆ ರಫ್ತುಗಳ ನಿರಂತರತೆಯನ್ನು ಖಾತ್ರಿಪಡಿಸುವ ಪ್ರತಿಕೂಲ ಸುಂಕ ಕ್ರಮಗಳಿಂದ ರಕ್ಷಿಸಲ್ಪಡುತ್ತವೆ ಎಂದು ಹೇಳಿದ್ದಾರೆ.

<>><><*><><<>

ಕೊಲಂಬೊದ ಸಿಂಹಳೀಸ್ ಸ್ಪೋರ್ಟ್ಸ್ ಕ್ಲಬ್ ನಲ್ಲಿ ತಡ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಟೂರ್ನಿಯಲ್ಲಿ ಪಾಕಿಸ್ತಾನ ತಂಡವು ಅಮೆರಿಕ ವಿರುದ್ಧ ೩೨ ರನ್ ಗಳ ಭರ್ಜರಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ನಿಗದಿತ ೨೦ ಓವರ್ ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೯೦ ರನ್ ಗಳಿಸಿತು. ಸಾಹಿಬ್ಜಾದಾ ಫರ್ಹಾನ್ ೭೩ ರನ್ ಗಳಿಸಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇದಕ್ಕೆ ಉತ್ತರವಾಗಿ ಅಮೆರಿಕ ತಂಡ ನಿಗದಿತ ೨೦ ಓವರ್ ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೫೮ ರನ್ ಗಳಿಸಿತು. ಶುಭಂ ರಂಜನೆ ೫೧ ರನ್ ಗಳಿಸಿ ಅಮೆರಿಕ ಪರ ಅತಿ ಹೆಚ್ಚು ರನ್ ಗಳಿಸಿದ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ’ಡಿ’ ಗುಂಪಿನ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ ಯುಎಇ ವಿರುದ್ಧ ೧೦ ವಿಕೆಟ್ ಗಳ ಭರ್ಜರಿ ಗೆಲುವು ದಾಖಲಿಸಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ’ಎ’ ಗುಂಪಿನ ಪಂದ್ಯದಲ್ಲಿ ನೆದರ್ಲೆಂಡ್ಸ್ ತಂಡ ನಮೀಬಿಯಾವನ್ನು ೭ ವಿಕೆಟ್ ಗಳಿಂದ ಮಣಿಸಿತು. ಇಂದು ಬೆಳಗ್ಗೆ ೧೧ ಗಂಟೆಗೆ ಅಹಮದಾಬಾದ್ ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ’ಡಿ’ ಗುಂಪಿನ ಪಂದ್ಯದಲ್ಲಿ

ದಕ್ಷಿಣ ಆಫ್ರಿಕಾ ಮತ್ತು ಅಫ್ಘಾನಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. 'ಬಿ' ಗುಂಪಿನ ಪಂದ್ಯದಲ್ಲಿ ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ಮಧ್ಯಾಹ್ನ ೩ ಗಂಟೆಗೆ ಆಸ್ಟ್ರೇಲಿಯಾ ತಂಡವು ಐರ್ಲೆಂಡ್ ತಂಡವನ್ನು ಎದುರಿಸಲಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಸಂಜೆ ೭ ಗಂಟೆಗೆ ನಡೆಯಲಿರುವ 'ಸಿ' ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ಮತ್ತು ವೆಸ್ಟ್ ಇಂಡೀಸ್ ತಂಡಗಳು ಎದುರಾಗಲಿವೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಮಧ್ಯಾಹ್ನ ೧೨ ಕ್ಕೆ ><><<>**